ಶ್ರೀ ಸಿ.ಆರ್. ಸಗೀರ್ ಅಹಮದ್ (ಸಾರಿಗೆ ಸಚಿವರು) :

ಅ) ಬಂದಿರುತ್ತದೆ.

ಆ) ಕಾಮಗಾರಿಗಾಗಿ ಮಂಜೂರಾತಿ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಸದರಿ ಕಾಮಗಾರಿಯನ್ನು ಸಂಸ್ಥೆಯ ಆರ್ಥಿಕ ಪರಿಸ್ಥಿತಿಗನುಗುಣವಾಗಿ ಕೈಗೊಳ್ಳಲಾಗುವುದು.

**ಚಿಕ್ಕನಾಯಕನಹಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್‌ಗಳ ಸಂಚಾರ**

4909 - ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ತುಮಕೂರು ಜಿಲ್ಲಾ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ವ್ಯಪ್ತಿಯಲ್ಲಿ ದಿನ ನಿತ್ಯ ಸಂಚರಿಸುವ ಬಸ್ಸುಗಳ ಸಂಖ್ಯೆ ಎಷ್ಟು?*

*ಆ) ತಾಲ್ಲೂಕು ಕೇಂದ್ರಗಳಿಂದ ಗ್ರಾಮೀಣ ಪ್ರದೇಶಗಳಿಗೆ ಬಸ್ ಸಂಚಾರ ವ್ಯವಸ್ಥೆಯನ್ನು ಸುಗಮಗೊಳಿಸಲು ತೆಗೆದುಕೊಂಡ ಕ್ರಮಗಳು ಯಾವುವು?*

ಶ್ರೀ ಸಿ.ಆರ್. ಸಗೀರ್ ಅಹಮದ್ (ಸಾರಿಗೆ ಸಚಿವರು) :

ಅ) ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಸೇರಿದಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ 41 ಸಾರಿಗೆಗಳು ಸಂಚರಿಸುತ್ತದೆ.

ಆ) 1. ತುಮಕೂರು ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ 94 ಸಾಮಾನ್ಯ ಸಾರಿಗೆಗಳು ಕಾರ್ಯಾಚರಣೆಯಾಗುತ್ತಿವೆ.

2. ಅಕ್ಟೋಬರ್ 1999 ರಿಂದೀಚೆಗೆ 81 ಹೊಸ ಮಾರ್ಗಗಳನ್ನು ತುಮಕೂರು ಜಿಲ್ಲೆಯಲ್ಲಿ ಪ್ರಾರಂಭಿಸಲಾಗಿದೆ.

3. ಜಿಲ್ಲೆಯ ರಾಷ್ಟ್ರೀಕೃತ ವಲಯದಲ್ಲಿ ಬರುವ ಎಲ್ಲಾ 148 ಗ್ರಾಮಗಳಿಗೂ ಮತ್ತು ರಾಷ್ಟ್ರೀಕೃತವಲ್ಲದ ವಲಯದಲ್ಲಿ ಬರುವ 859 ಗ್ರಾಮಗಳಿಗೂ ಸಾರಿಗೆ ಸೌಲಭ್ಯವನ್ನು ಒದಗಿಸಲಾಗಿದೆ.

**ರಾಜ್ಯದಲ್ಲಿ ಆಶ್ರಯ ಸಮಿತಿಗಳು**

4910 - ಶ್ರೀ ಸಿಂಧ್ಯ ಪಿ.ಜಿ.ಆರ್. (ಕನಕಪುರ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ರಾಜ್ಯದಲ್ಲಿ ಆಶ್ರಯ ಮತ್ತು ಇತರೆ ಯೋಜನೆಯಡಿಯಲ್ಲಿ ಮನೆಗಳನ್ನು ಕಟ್ಟಲು ಮತ್ತು*